ಎರಡನೇ ಅಪರ ಜಿಲ್ಲಾ ಮತ್ತು ಸತ್ರ ನ್ಯಾಯಾಲಯ
ಬೆಂಗಳೂರು ಗ್ರಾಮಾಂತರ ಜಿಲ್ಲೆ, ಬೆಂಗಳೂರು

ಸ್ಪೆಷಲ್ ಕೇಸ್ ನಂಃ 65/2013

(ಪ್ರಾಸಾ-7 ಚಾಸಾ-9 )
ಸಾಕ್ಷಿಗೆ ಪ್ರಮಾಣ ವಚನ ಭೋದಿಸಲಾಯಿತು
ದಿಃ 13.03.2025

| | | |
|---|---|---|
| ಸಾಕ್ಷಿದಾರರ ಹೆಸರು | - | ನಾಗರಾಜು |
| ತಂದೆಯ ಹೆಸರು | - | ರೇವಣ್ಣ |
| ವಯಸ್ಸು | - | 60 ವರ್ಷ, |
| ಉದ್ಯೋಗ | - | ಕೂಲಿ ಕೆಲಸ |
| ವಾಸ | - | ನಾಗೇಗೌಡನಪಾಳ್ಯ |

ಮುಖ್ಯ ವಿಚಾರಣೆಃ ಮಾನ್ಯ ವಿಶೇಷ ಸರ್ಕಾರಿ ಅಭಿಯೋಜಕರಿಂದಃ

ಈಗ ನಾನು ಅಮಾನತು ಪಂಚನಾಮೆಯನ್ನು ನೋಡುತ್ತಿದ್ದು ಅದರಲ್ಲಿ ನನ್ನ ಸಹಿ ಇರುತ್ತದೆ. ಸದರಿ ಪಂಚನಾಮೆಯನ್ನು ಈಗಾಗಲೇ ನಿಶಾನೆ ಪಿ-5 ಎಂದು ಗುರುತಿಸಲಾಗಿದ್ದು ಅದರಲ್ಲಿರುವ ಸಾಕ್ಷಿ ಸಹಿಯನ್ನು ನಿಶಾನೆ ಪಿ-5(ಬಿ) ಎಂದು ಗುರುತಿಸಲಾಯಿತು. ನಿಶಾನೆ ಪಿ-5 ರಲ್ಲಿ ಬರೆದಿರುವ ವಿಚಾರಗಳು ನನಗೆ ಗೊತ್ತಿಲ್ಲ. ಪೋಲಿಸರು ನಮ್ಮ ಊರಿಗೆ ಬೀಟಿಗೆ ಬಂದಾಗ 2012 ನೇ ಇಸವಿಯಲ್ಲಿ ಈ ದಾಖಲೆಗೆ ನನ್ನ ಸಹಿ ತೆಗೆದುಕೊಂಡಿರುತ್ತಾರೆ. ನನ್ನೊಂದಿಗೆ ಬೇರೆ ಯಾರು ಸಹಿ ಮಾಡಿರುವುದಿಲ್ಲ. ನನಗೆ ಪೋಲಿಸರು ಯಾವುದೇ ವಸ್ತುವನ್ನು ತೋರಿಸಿರುವುದಿಲ್ಲ. ಈಗ ನ್ಯಾಯಾಲಯದ ಮುಂದೆ ಇರುವ 3 ನೇ ಆರೋಪಿ ನಮ್ಮ ಊರಿನವರಾಗಿದ್ದು ನನಗೆ ಪರಿಚಯ.

(ಈ ಹಂತದಲ್ಲಿ ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿಯಾಗಿ ಪರಿಗಣಿಸಿ ಪಾಟೀ ಸವಾಲು ಮಾಡಲು ಮಾನ್ಯ ಎಸ್ ಪಿಪಿ ರವರು ವಿನಂತಿಸಿದ್ದರಿಂದ ಸಾಕ್ಷಿಯ ಹೇಳಿಕೆ ಹಾಗೂ ಇತರೆ ನ್ಯಾಯಾಲಯದ ದಾಖಲಾತಿಗಳನ್ನು ಪರಿಶೀಲಿಸಿ ಅನುಮತಿ ನೀಡಲಾಯಿತು.)

ಪಾಟೀ ಸವಾಲುಃ ಮಾನ್ಯ ವಿಶೇಷ ಸರ್ಕಾರಿ ಅಭಿಯೋಜಕರಿಂದಃ

2. ದಿಃ20.10.2012 ರಂದು ತಲಘಟ್ಟಪುರ ಜ್ಞಾನಸ್ವೀಕಾರ ಶಾಲೆಯ ಮುಂಭಾಗ

3 ನೇ ಆರೋಪಿ ತೋರಿಸಿ ಹಾಜರುಪಡಿಸಿದ ಒಂದು ಬಿಯರ್ ಬಾಟಲ್ ನ ಚೂರನ್ನು ಪೋಲಿಸರು ನನ್ನ ಮತ್ತು ಫ್ರಾಸಾ-6 ರವರ ಸಮಕ್ಷಮ ಅಮಾನತುಪಡಿಸಿಕೊಂಡು ಸಂಜೆ 4 ರಿಂದ 5 ಘಂಟೆಗೆ ಅಮಾನತು ಪಂಚನಾಮೆ ಕ್ರಮ ಜರುಗಿಸಿ ಅದರಲ್ಲಿ ಬರೆದಿರುವ ವಿಷಯಗಳನ್ನು ನಮಗೆ ಓದಿ ಹೇಳಿದಾಗ ನಾವು ಅದರಲ್ಲಿ ಬರೆದಿರುವುದನ್ನು ತಿಳಿದುಕೊಂಡು ಸಹಿ ಮಾಡಿರುತ್ತೇನೆ ಎಂದರೆ ಸರಿಯಲ್ಲ. ಬಿಯರ್ ಬಾಟಲ್ ಅನ್ನು ನನ್ನ ಮುಂದೆ 3 ನೇ ಆರೋಪಿ ಹಾಜರುಪಡಿಸಿದ್ದರೂ ಸಹ ಹಾಗೂ ಪೋಲಿಸರು ನಿಶಾನೆ ಪಿ-5 ರಂತೆ ನನ್ನ ಸಮಕ್ಷಮ ಪಂಚನಾಮೆ ಜರುಗಿಸಿದ್ದರೂ ಸಹ ಆರೋಪಿತರ ಮಾತು ಕೇಳಿಕೊಂಡು ಸುಳ್ಳು ಸಾಕ್ಷಿ ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ.

**<u>ಪಾಟೀ ಸವಾಲುಃ</u>  <u>ಆರೋಪಿತರ ಪರ ವಕೀಲರಿಂದಃ</u>**

ಆರೋಪಿ ಪರ ವಕೀಲರು ಗೈರು ಹಾಜರಾಗಿದ್ದು ಪಾಟೀ ಸವಾಲು ಇಲ್ಲ ಎಂದು ಪರಿಗಣಿಸಲಾಯಿತು.

**<u>ಮರುವಿಚಾರಣೆಃ ಇಲ್ಲ</u>**

(ಸಾಕ್ಷಿ ಹೇಳಿದಂತೆ ಹೇಳಿಕೆಯನು ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದ ಮೇರೆಗೆ ಬೆರಳಚ್ಚು ಮಾಡಿಸಿ ಓದಿ ಹೇಳಿದ್ದು ಸಾಕ್ಷಿ ಸರಿ ಇರುವುದಾಗಿ ಒಪ್ಪಿರುತ್ತಾರೆ ಎಂದು ದೃಡೀಕರಿಸುತ್ತೇನೆ)

ಓ ಹೇ ಸಾ ಸ ಸಹಿ ಮಾಡಿದ್ದಾರೆ,

(ಕೆ. ಗುರುಪ್ರಸಾದ್)
ಎರಡನೇ ಅಪರ ಜಿಲ್ಲಾ ಮತ್ತು ಸತ್ರ ನ್ಯಾಯಾಲಯ
ಬೆಂಗಳೂರು ಗ್ರಾಮಾಂತರ ಜಿಲ್ಲೆ, ಬೆಂಗಳೂರು